# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 696

ವಿಧಾನ ಪರಿಷತ್ತು ಸದಸ್ಯರ ಹೆಸರು : ಡಾ|| ಧನಂಜಯ ಸರ್ಜಿ
(ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 18.08.2025

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪಡಿತರ ಚೀಟಿ ಇಲ್ಲದೆ ಇರುವ ಕುಟುಂಬಗಳೆಷ್ಟು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ 3,27,309 ಅರ್ಜಿಗಳು ಹಾಗೂ ಆದ್ಯತೇತರ ಪಡಿತರ ಚೀಟಿ ಕೋರಿ 1,30,694 ಅರ್ಜಿಗಳು ಬಾಕಿ ಇರುತ್ತವೆ. |
| ಆ | ಸರ್ಕಾರದ ಗ್ಯಾರಂಟಿ ಯೋಜನೆಯೂ ಸೇರಿದಂತೆ, ಸರ್ಕಾರದ ವಿವಿಧ ಯೋಜನೆ ಮತ್ತು ಕೆಲಸ ಕಾರ್ಯಗಳಿಗೆ ಪಡಿತರ ಚೀಟಿ ಕಡ್ಡಾಯವಿರುವುದರಿಂದ ಪಡಿತರ ಚೀಟಿ ಇಲ್ಲದೆ ಜನರು ಸಂಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ:29.09.2023 ರನ್ವಯ 1,99,410 ಹೊಸ ಆದ್ಯತಾಪಡಿತರ ಚೀಟಿಗಳನ್ನು ವಿತರಿಸಲಾಗಿರುತ್ತದೆ.<br><br>ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ-2013 ರಡಿ ರಾಜ್ಯದಲ್ಲಿ 4,01,93,000 ಫಲಾನುಭವಿಗಳಿಗೆ ಪಡಿತರ ವಿತರಿಸಲು ಗುರಿಯನ್ನು ನಿಗಧಿಪಡಿಸಲಾಗಿರುತ್ತದೆ. ಆದರೆ ರಾಜ್ಯದಲ್ಲಿ 4,53,89,504 ಫಲಾನುಭವಿಗಳಿಗೆ ಆಹಾರ ಧಾನ್ಯವನ್ನು ವಿತರಿಸಲಾಗಿರುತ್ತದೆ.<br><br>ಆದ್ದರಿಂದ, ಈಗಾಗಲೇ ಆದ್ಯತಾ ಪಡಿತರ ಚೀಟಿ (PHH) ಪಡಿತರ ಚೀಟಿ ಪಡೆದಿರುವವರಲ್ಲಿ ಅನರ್ಹರನ್ನು ಪತ್ತೆ ಹಚ್ಚುವ ಕಾರ್ಯವು ನಿರಂತರವಾಗಿ ನಡೆಯುತ್ತಿದ್ದು, ಅನರ್ಹ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ ಅಷ್ಟೇ ಪ್ರಮಾಣದ ಹೊಸ ಪಡಿತರ ಚೀಟಿ ನೀಡಲು ಅವಕಾಶವಿರುತ್ತದೆ.<br><br>ಆದಾಗ್ಯೂ, ತುರ್ತು ವೈದ್ಯಕೀಯ ಪರಿಸ್ಥಿತಿ ಹಿನ್ನೆಲೆ ಇರುವ ಅರ್ಹರಿಗೆ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಹಾಗೂ PVTG's ರಡಿ ಬರುವ ಬುಡಕಟ್ಟು ಸಮುದಾಯದವರಿಗೆ ಪಡಿತರ ಚೀಟಿಯನ್ನು ಕಾಲಕಾಲಕ್ಕೆ ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಇ | ರಾಜ್ಯದ ಎಲ್ಲಾ ಕುಟುಂಬಗಳಿಗೆ ಪಡಿತರ ಚೀಟಿ ಒದಗಿಸಲು ಇರುವ ತೊಡಕುಗಳೇನು; | |

| | | |
|---|---|---|
| ಈ | ಎ.ಪಿ.ಎಲ್ ಪಡಿತರ ಚೀಟಿ ಒದಗಿಸಲಾಗುತ್ತಿದೆಯೇ; ಇಲ್ಲವಾದಲ್ಲಿ ವಿತರಿಸಲು ಇರುವ ತೊಂದರೆಗಳೇನು; | ಆದ್ಯತೇತರ (NPHH) ಪಡಿತರ ಚೀಟಿ ವಿತರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |
| ಉ | ರಾಜ್ಯದಲ್ಲಿರುವ ಒಟ್ಟು ಕುಟುಂಬಗಳೆಷ್ಟು; ಪ್ರಸ್ತುತ ವಿತರಿಸಿರುವ ಪಡಿತರ ಚೀಟಿಗಳು (ಎ.ಪಿ.ಎಲ್/ಬಿ.ಪಿ.ಎಲ್)ಎಷ್ಟು; ಕಳೆದ 2 ವರ್ಷಗಳಲ್ಲಿ ರದ್ದಾದ ಪಡಿತರ ಚೀಟಿಗಳೆಷ್ಟು; | ರಾಜ್ಯದಲ್ಲಿ 2011 ರ ಜನಗಣತಿ ಪ್ರಕಾರ 1,31,29,911 ಕುಟುಂಬಗಳು ಇರುತ್ತವೆ. ರಾಜ್ಯದಲ್ಲಿ ಈ ಕೆಳಕಂಡಂತೆ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ (see table below). ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆಯಡಿ ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚುವ ಕಾರ್ಯ ನಿರಂತರವಾಗಿ ನಡೆಯುತ್ತಿರುತ್ತದೆ. 2024-25ನೇ ಸಾಲಿನಿಂದ ಇಲ್ಲಿಯವರೆಗೆ 8,00,793 ಅನರ್ಹ ಫಲಾನುಭವಿಗಳನ್ನು ಹಾಗೂ 7,71,911 ಅನರ್ಹ ಪಡಿತರ ಚೀಟಿಗಳನ್ನು ಪತ್ತೆಹಚ್ಚಿದ್ದು, ಸದ್ರಿ ಪಡಿತರ ಚೀಟಿಗಳ ಪರಿಶೀಲನೆ ಕಾರ್ಯ ಪ್ರಗತಿಯಲ್ಲಿರುತ್ತದೆ ಹಾಗೂ 10,810 ಅನರ್ಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ. |
| ಊ | ಅರ್ಹರಿಗೆ ಪಡಿತರ ಚೀಟಿ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; ಕನಿಷ್ಟ ಎ.ಪಿ.ಎಲ್ ಪಡಿತರ ಚೀಟಿ ಒದಗಿಸುವ ಕುರಿತು ಸರ್ಕಾರ ಕೈಗೊಳ್ಳಲಿರುವ ಕ್ರಮಗಳಾವುವು? | ತುರ್ತು ವೈದ್ಯಕೀಯ ಪರಿಸ್ಥಿತಿ ಹಿನ್ನೆಲೆ ಇರುವ ಅರ್ಹರಿಗೆ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಹಾಗೂ PVTG's ರಡಿ ಬರುವ ಬುಡಕಟ್ಟು ಸಮುದಾಯದವರಿಗೆ ಪಡಿತರ ಚೀಟಿಯನ್ನು ಕಾಲಕಾಲಕ್ಕೆ ವಿತರಿಸಲು ಕ್ರಮವಹಿಸಲಾಗುತ್ತಿದೆ.<br>ಆದ್ಯತೇತರ (NPHH) ಪಡಿತರ ಚೀಟಿ ವಿತರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |

| ವಿವರ | ಪಡಿತರ ಚೀಟಿ ಸಂಖ್ಯೆ | ಫಲಾನುಭವಿಗಳ ಸಂಖ್ಯೆ |
|---|---|---|
| ಅಂತ್ಯೋದಯ ಅನ್ನ ಪಡಿತರ ಚೀಟಿ | 10,76,942 | 43,96,248 |
| ಆದ್ಯತಾ ಪಡಿತರ ಚೀಟಿ | 1,17,31,508 | 4,09,75,963 |
| ಆದ್ಯತೇತರ ಪಡಿತರ ಚೀಟಿ | 25,67,419 | 87,41,704 |
| ಒಟ್ಟು | 1,53,65,869 | 5,41,13,915 |

ಇ-ಆನಾಸ 220 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು